# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಉತ್ತರ ಕರ್ನಾಟಕದ 5 ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವ ಯೋಜನೆಗೆ ಪೂರ್ವ ಕಾರ್ಯಸಾಧ್ಯತಾ ವರದಿಯನ್ನು ತಯಾರಿಸುವ ಕುರಿತು.

ಓದಲಾಗಿದೆ: 1) 2022-23 ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಘೋಷಣೆ:
2)ಮಾನ್ಯ ಮುಖ್ಯ ಮಂತ್ರಿಯವರ ಟಿಪ್ಪಣಿ ಸಂಖ್ಯೆ: Pscm/T/1524/2022, ದಿನಾಂಕ:16.03.2022.

***

**<u>ಪ್ರಸ್ತಾವನೆ:</u>**

ಮೇಲೆ ಓದಲಾದ (1) ರ ಆಯವ್ಯಯ ಭಾಷಣದಲ್ಲಿ ಈ ಕೆಳಕಂಡಂತೆ ಯೋಜನೆ ಕುರಿತು ಘೋಷಣೆ ಮಾಡಲಾಗಿರುತ್ತದೆ.

**"78) ಕಾಳೀ ನದಿಯಿಂದ ನೀರನ್ನು ಬಳಸಿಕೊಂಡು ಉತ್ತರ ಕರ್ನಾಟಕದ ಐದು ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವ ಯೋಜನೆಯನ್ನು ರೂಪಿಸಲಾಗುವುದು."**

ಕಾಳಿ ನದಿಯು ಕರ್ನಾಟಕ ರಾಜ್ಯದ ಉತ್ತರ ಕನ್ನಡ ಜಿಲ್ಲೆಯಲ್ಲಿ ಕೃಷವಳ್ಳಿ ಗ್ರಾಮದ ಬಳಿ ಉಗಮ ಹೊಂದಿ 184 km ಹರಿದು ಕಾರವಾರ ಬಳಿ ಅರಬ್ಬಿ ಸಮುದ್ರ ಸೇರುತ್ತದೆ. ಸದರಿ ನದಿಗೆ ಅಡ್ಡಲಾಗಿ ವಿದ್ಯುತ್ ಉತ್ಪಾದನೆಗೆ ಅನೇಕ ಘಟಕಗಳನ್ನು ಸ್ಥಾಪಿಸಲಾಗಿದ್ದು, ಈ ಪೈಕಿ ಗಣೇಶಗುಡಿ ಹತ್ತಿರ ಸೂಪಾ ಡ್ಯಾಂ ಒಂದು ಪ್ರಮುಖ ಘಟಕವಾಗಿರುತ್ತದೆ.

ಮೇಲೆ ಓದಲಾದ (2) ರ ಮಾನ್ಯ ಮುಖ್ಯ ಮಂತ್ರಿಯವರ ಟಿಪ್ಪಣಿಯಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ತಮ್ಮ ಇಲಾಖಾ ವತಿಯಿಂದ ಪ್ರಸ್ತಾವನೆಗಳನ್ನು ತಯಾರಿಸಿ, ಈ ತಿಂಗಳ ಅಂತ್ಯದೊಳಗಾಗಿ ಈ ಯೋಜನೆಗಳ ಎಲ್ಲಾ ರೂಪರೇಷೆಗಳನ್ನು ಸಿದ್ಧಪಡಿಸಿಕೊಂಡು ಹಾಗೂ ಆರ್ಥಿಕ ಇಲಾಖೆಯು ಹೊರಡಿಸುವ ಆಯವ್ಯಯ ಸಲಹೆಯಂತೆ (Budget Advice) ದಿನಾಂಕ:01.04.2022 ರಿಂದ ಜಾರಿಗೆ ಬರುವಂತೆ ಎಲ್ಲಾ ಸರ್ಕಾರಿ ಆದೇಶಗಳನ್ನು ಹೊರಡಿಸಲು ಹಾಗೂ ಮೇಲ್ಕಂಡ ಯೋಜನೆಗಳನ್ನು ಅತೀ ಶೀಘ್ರವಾಗಿ ಅನುಷ್ಠಾನಗೊಳಿಸಲು ಕಾರ್ಯಪ್ರವೃತರಾಗುವಂತೆ ನಿರ್ದೇಶಿಸಲಾಗಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಗಿನಂತೆ ಆದೇಶವನ್ನು ಹೊರಡಿಸಲಾಗಿದೆ

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 38 ಎಂಪಿಜಡ್ 2022, ಬೆಂಗಳೂರು, ದಿನಾಂಕ: 26.04.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕಾಳಿ ನದಿಯಿಂದ ನೀರನ್ನು ಬಳಸಿಕೊಂಡು ಉತ್ತರ ಕರ್ನಾಟಕದ 5 ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸುವ ಯೋಜನೆಗೆ ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ ವತಿಯಿಂದ ಪೂರ್ವ ಕಾರ್ಯಸಾಧ್ಯತಾ ವರದಿಯನ್ನು (Pre-Feasibility Report) 6 ತಿಂಗಳ ಅವಧಿಯೊಳಗಾಗಿ ತಯಾರಿಸಿ ಸರ್ಕಾರಕ್ಕೆ ಸಲ್ಲಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

26/4/2022

**(ರವೀಂದ್ರ ಕೊಂಡ)**
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-5),
ಜಲ ಸಂಪನ್ಮೂಲ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು (ಎ&ಇ) / (ಇ&ಆರ್.ಎಸ್.ಎ)/(ಜಿ.&ಎಸ್.ಎಸ್.ಎ)ಕರ್ನಾಟಕ ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು .
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜ.ಸಂ.ಇಲಾಖೆ
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ
5. ಪ್ರಧಾನ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು
6. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ.
7. ಸರ್ಕಾರದ ಉಪ ಕಾರ್ಯದರ್ಶಿ (ಕೃಭಾಜನಿ), ಜಲ ಸಂಪನ್ಮೂಲ ಇಲಾಖೆ.
8. ತಾಂತ್ರಿಕ ಸಹಾಯಕರು-6, ಜಲ ಸಂಪನ್ಮೂಲ ಇಲಾಖೆ .
9. ಶಾಖಾ ರಕ್ಷಾ ಕಡತ/ ಹೆಚ್ಚಿನ ಪ್ರತಿ.